# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 442 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 07/12/2023 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಜಲಸಂಗಿ ಕಲ್ಲೇಶ್ವರ ದೇವಸ್ಥಾನ ಹಾಗೂ ವಿಶ್ವ ಪ್ರಸಿದ್ಧ ಕರೇಜ (ಸುರಂಗ ಬಾವಿ) ಅಧಿಕಾರಿಗಳ ನಿರ್ಲಕ್ಷ್ಯದಿಂದ ಅವನತಿಯ ಅಂಚಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬೀದರ್ ಜಿಲ್ಲೆಯ ಜಲಸಂಗಿ ಕಲ್ಲೇಶ್ವರ (ಈಶ್ವರ) ದೇವಾಲಯ ಹಾಗೂ ಕರೇಜ್ (ಸುರಂಗ ಬಾವಿ) ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಬಂದಿದ್ದಲ್ಲಿ, ಇವುಗಳ ಪುನಶ್ಚೇತನ ಮಾಡಲು ಹಾಗೂ ಅವುಗಳನ್ನು ರಕ್ಷಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ನಿರ್ಲಕ್ಷ್ಯ ಮಾಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆಯೇ ? | ಬೀದರ ಜಿಲ್ಲೆಯ ಜಲಸಂಗಿ ಕಲ್ಲೇಶ್ವರ ದೇವಸ್ಥಾನವು ಸಂರಕ್ಷಿತ ಸ್ಮಾರಕವಾಗಿರುತ್ತದೆ.<br><br>ಬೀದರ ಜಿಲ್ಲೆಯ ಜಲಸಂಗಿ ಕಲ್ಲೇಶ್ವರ ದೇವಸ್ಥಾನದ ಪುನಶ್ಚೇತನ ಮತ್ತು ಸಂರಕ್ಷಣೆಗೆ ಸಂಬಂಧಿಸಿದಂತೆ, ಜಿಲ್ಲಾಧಿಕಾರಿ, ಬೀದರ್ ಜಿಲ್ಲೆರವರಿಂದ ಪ್ರಸ್ತಾವನೆಯನ್ನು ಪಡೆದು ಮುಂದಿನ ವರ್ಷದ ಆಯವ್ಯಯದಲ್ಲಿ ಇಲಾಖೆಗೆ ಒದಗಿಸುವ ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಪರಿಶೀಲಿಸಿ ಸಂರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುವುದು.<br><br>2015-16ನೇ ಸಾಲಿನಲ್ಲಿ ಬೀದರ್ ನಗರದ ಕರೇಜ್ ಸುತ್ತಲಿನ ಪ್ರದೇಶದ ಸೌಂದರ್ಯೀಕರಣಕ್ಕಾಗಿ ರೂ.270.00 ಲಕ್ಷಗಳ ಕಾಮಗಾರಿಗೆ ಮಂಜೂರಾತಿ ನೀಡಲಾಗಿತ್ತು. ಸದರಿ ಕಾಮಗಾರಿಗೆ ರೂ.50.00 ಲಕ್ಷಗಳನ್ನು ಜಿಲ್ಲಾಧಿಕಾರಿ, ಬೀದರ್‌ರವರಿಗೆ ಬಿಡುಗಡೆ ಮಾಡಲಾಗಿತ್ತು. ಈ ಕಾಮಗಾರಿಯ ಅನುಷ್ಠಾನಕ್ಕಾಗಿ ಲೋಕೋಪಯೋಗಿ ಇಲಾಖೆಯಿಂದ ದಿನಾಂಕ: 03.01.2017 ಹಾಗೂ 17.01.2018 ರಂದು ಟೆಂಡರ್ ಕರೆಯಲಾಗಿತ್ತು. ಆದರೆ, 02 ಟೆಂಡರ್‌ಗಳಲ್ಲಿ ಯಾವುದೇ ಗುತ್ತಿಗೆದಾರರು ಭಾಗವಹಿಸಿರುವುದಿಲ್ಲವೆಂದು ಕಾರ್ಯ ನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಬೀದರ್‌ರವರು ದಿನಾಂಕ:23.02.2018ರ ಪತ್ರದಲ್ಲಿ ವರದಿ ನೀಡಿದ್ದು, ಈ ವರದಿಯನ್ನು ಆಧಾರಿಸಿ ಕಾಮಗಾರಿಯನ್ನು ಪ್ರಾರಂಭಿಸದೇ ಇರುವುದರಿಂದ, ಸರ್ಕಾರದ ಆದೇಶ ಸಂಖ್ಯೆ: ಪ್ರಇ 14 ಪ್ರವಾಯೋ 2019, ದಿನಾಂಕ:20.07.2019ರಲ್ಲಿ ರದ್ದುಪಡಿಸಿ ಆದೇಶಿಸಲಾಗಿದೆ. |

| | | |
|---|---|---|
| | | ಬೀದರ್ ನಗರದ ವ್ಯಾಪ್ತಿಯಲ್ಲಿ ಬರುವ ಕರೇಜ್ ಪ್ರದೇಶದ ತಡೆಗೋಡೆ, ನೀರಿನ ಕಿಂಡಿಗಳ ಪ್ಯಾರಾಪೆಟ್ ಗೋಡೆ, ನೀರಿನ ಕಿಂಡಿಗಳ ಗ್ರಿಲ್ ಅಳವಡಿಕೆ ಹಾಗೂ ಗಿಡಗಂಟೆಗಳನ್ನು ತೆಗೆಯುವ ಕಾಮಗಾರಿಗಳನ್ನು ನಿರ್ಮಿತಿ ಕೇಂದ್ರ ಇವರ ಮೂಲಕ ರೂ.50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ದಿನಾಂಕ:27-11-2023ರಂದು ಪ್ರಸ್ತಾವನೆ ಸ್ವೀಕೃತವಾಗಿದ್ದು, ಅನುದಾನದ ಲಭ್ಯತೆಗೆ ಒಳಪಟ್ಟು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಇ) | ಕರೇಜ (ಸುರಂಗ ಬಾವಿ) ರಕ್ಷಣೆ ಮಾಡಬೇಕಾದರೆ ಸರ್ಕಾರವು ಮೊದಲು ಬಫರ್ ಝೋನ್ ಘೋಷಿಸಿ ನಂತರ ಕ್ರಮವಹಿಸ ಬೇಕಾಗಿದ್ದು, ಸರ್ಕಾರ ಯಾವ ಕಾಲಮಿತಿಯೊಳಗೆ ಅಭಿವೃದ್ಧಿಪಡಿಸಲಾಗುವುದು ? | ಕರೇಜ್(ಸುರಂಗ ಬಾವಿ) ಅರಕ್ಷಿತ ಸ್ಮಾರಕವಾಗಿದ್ದು, ಸದರಿ ಸ್ಮಾರಕವನ್ನು ಸಂರಕ್ಷಿತ ಸ್ಮಾರಕವೆಂದು ಘೋಷಿಸಲು ಕ್ರಮವಹಿಸಲಾಗುವುದು.<br><br>ಪ್ರಸ್ತುತ ಕರೇಜ್(ಸುರಂಗ ಬಾವಿ) ಅರಕ್ಷಿತ ಸ್ಮಾರಕವಾಗಿದ್ದು, ಸದರಿ ಸ್ಮಾರಕವನ್ನು ಮೊದಲು ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ ಕಲ 4(3)ರನ್ವಯ ರಾಜ್ಯ ಸಂರಕ್ಷಿತ ಸ್ಮಾರಕವೆಂದು ಘೋಷಿಸಬೇಕಾಗುತ್ತದೆ. ಈ ರೀತಿ ಘೋಷಿಸಿದ ನಂತರ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂಕಇ 21 ಕೆಎಂಯು 1995, ದಿನಾಂಕ: 10-03-1998ರನ್ವಯ ಸ್ಮಾರಕದ ಹತ್ತಿರದ ಅಥವಾ ಅದಕ್ಕೆ ಹೊಂದಿಕೊಂಡಿರುವ 100 ಮೀಟರ್ ಪ್ರದೇಶವು ನಿರ್ಮಾಣ/ಗಣಿಗಾರಿಕೆ ಉದ್ದೇಶಗಳಿಗಾಗಿ ನಿಷೇಧಿತ ಪ್ರದೇಶವಾಗಿರುತ್ತದೆ. ತದನಂತರದ 200 ಮೀಟರ್ ಪ್ರದೇಶವು ನಿಯಂತ್ರಿತ ಪ್ರದೇಶವಾಗಿರುತ್ತದೆ.<br><br>ಕರೇಜ್(ಸುರಂಗ ಬಾವಿ) ಅನ್ನು ರಾಜ್ಯ ರಕ್ಷಿತ ಸ್ಮಾರಕವೆಂದು ಘೋಷಿಸಲು ಸೂಕ್ತ ಕ್ರಮವಹಿಸಲಾಗುವುದು. |

**ಸಂಖ್ಯೆ: ಟಿಒಆರ್ 203 ಟಿಡಿಓ 2023**

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು